**All India Radio: Bangalore**
**National Bulletin In Kannada**
**16.04.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**16.04.2025 13.10 p.m.**
***************

ಮುಖ್ಯಾಂಶಗಳು

1. ಭಾರತ – ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಕುರಿತಂತೆ ಶೀಘ್ರ ಚರ್ಚೆ; ಆರಂಭಿಕ ಹಂತದ ಪ್ರಸ್ತಾಪಗಳಿಗೆ ಸಹಿ
2. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಧರ್ಮಾಧಾರಿತ ಸದಸ್ಯತ್ವ ಪ್ರಸ್ತಾವನೆಗೆ ಭಾರತ ಸೇರಿದಂತೆ ಜಿ–4 ರಾಷ್ಟ್ರಗಳ ವಿರೋಧ
3. ಮಾರ್ಚ್‌ನಲ್ಲಿ ಭಾರತದ ಚಿಲ್ಲರೆ ಹಣದುಬ್ಬರ ದರ ಶೇಕಡ 3.34 ಕ್ಕೆ ಇಳಿಕೆ
4. ಐಎಸ್‌ಎಸ್‌ಎಫ್ ಶೂಟಿಂಗ್ ವಿಶ್ವಕಪ್; ಮಹಿಳಾ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಭಾರತದ ಸುರುಚಿ ಸಿಂಗ್‌ಗೆ ಚಿನ್ನ
5. ಐಪಿಎಲ್ ಟಿ–20 ಕ್ರಿಕೆಟ್; ಇಂದು ಡೆಲ್ಲಿ ಕ್ಯಾಪಿಟಲ್ಸ್ – ರಾಜಸ್ಥಾನ ರಾಯಲ್ಸ್ ಹಣಾಹಣಿ

***************

ಭಾರತ ಹಾಗೂ ಅಮೆರಿಕ ದ್ವಿಪಕ್ಷೀಯ ವ್ಯಾಪರ ಒಪ್ಪಂದಗಳ ಕುರಿತಂತೆ ಈ ವಾರ ಚರ್ಚೆ ನಡೆಸುವ ನಿರೀಕ್ಷೆಯಿದೆ.

ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಆರಂಭಿಕ ಹಂತದ ಉಲ್ಲೇಖಿತ ನಿಯಮಗಳಿಗೆ ಉಭಯ ರಾಷ್ಟ್ರಗಳು ಸಹಿ ಹಾಕಿವೆ. ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಕಾರ್ಯದರ್ಶಿ ಸುನೀಲ್ ಬಾತ್ರ್ವಾಲ್, ಪರಸ್ಪರ ಪ್ರಯೋಜನಕಾರಿ ಬಹು ವಲಯದ ದ್ವಿಪಕ್ಷೀಯ ವ್ಯಾಪರ ಒಪ್ಪಂದದೆಡೆಗೆ ಸಾಗಲು ಮುಂದಿನ ಹಂತದ ಕ್ರಮಗಳ ಕುರಿತಂತೆ ಉಭಯ ರಾಷ್ಟ್ರಗಳಲ್ಲಿ ಒಮ್ಮತ ವ್ಯಕ್ತವಾಗಿದೆ. ಈ ವರ್ಷದ ಕೊನೆಯಲ್ಲಿ ಒಪ್ಪಂದದ ಮೊದಲ ಭಾಗ ಅಂತಿಮಗೊಳಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

ಅಮೆರಿಕ ವಿಧಿಸಿರುವ ಪ್ರಸ್ತುತ ಸುಂಕಗಳ ಪರಿಣಾಮ ಭಾರತಕ್ಕೆ ಅನಾನುಕೂಲದ ಜೊತೆಗೆ ಉತ್ತಮ ಅವಕಾಶಗಳೂ ಇವೆ. ಆದಾಗ್ಯೂ, ಭಾರತವು ವ್ಯಾಪಾರ ಉದಾರೀಕರಣದ ಮಾರ್ಗದಲ್ಲಿ ಮುನ್ನಡೆದಿದ್ದು, ಅಮೆರಿಕದೊಂದಿಗೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದವನ್ನು ಮುಂದುವರಿಸುತ್ತಿದೆ. ಅಮೆರಿಕದೊಂದಿಗೆ ಭಾರತದ ವ್ಯಾಪಾರವು 2030 ರ ವೇಳೆಗೆ 500 ಶತಕೋಟಿ ಡಾಲರ್‌ಗಳನ್ನು ತಲುಪುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

***************

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಧರ್ಮದ ಆಧಾರದ ಮೇಲೆ ಸ್ಥಾನಗಳನ್ನು ಹಂಚುವ ಪ್ರಸ್ತಾಪಗಳನ್ನು ಭಾರತ ಸೇರಿದಂತೆ ಜಿ-4 ರಾಷ್ಟ್ರಗಳಾದ ಬ್ರೆಜಿಲ್, ಜರ್ಮನಿ ಮತ್ತು ಜಪಾನ್ ವಿರೋಧಿಸಿವೆ.

ನ್ಯೂಯಾರ್ಕ್‌ನಲ್ಲಿರುವ ವಿಶ್ವಸಂಸ್ಥೆ ಪ್ರಧಾನ ಕಚೇರಿಯಲ್ಲಿ ಜಿ-4 ರಾಷ್ಟ್ರಗಳ ಪರವಾಗಿ ಸಮಿತಿ ಸುಧಾರಣೆಗಳ ಕುರಿತು ನಡೆದ ಅಂತರ್ ಸರ್ಕಾರಿ ಮಾತುಕತೆ- ಐಜಿಎನ್ ಸಭೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಯ ಭಾರತದ ಕಾಯಂ ಪ್ರತಿನಿಧಿ ಪರ್ವತನೇನಿ ಹರೀಶ್, ಪ್ರಾದೇಶಿಕ ಪ್ರಾತಿನಿಧ್ಯವೇ ಮಂಡಳಿಯ ಸದಸ್ಯತ್ವಕ್ಕೆ ಆಧಾರವಾಗಿದೆಯೇ ಹೊರತು ಧರ್ಮವಲ್ಲ. ಮಂಡಳಿಯಲ್ಲಿ ಧರ್ಮಾಧಾರಿತ ಸದಸ್ಯತ್ವನ್ನು ಪರಿಚಯಿಸುವುದು ವಿಶ್ವಸಂಸ್ಥೆ ಪದ್ಧತಿಯ ವಿರುದ್ಧವಾಗಿದೆ ಎಂದರು.

ಟರ್ಕಿ ಅಧ್ಯಕ್ಷ ರೆಸೆಪ್ ತಯಿಪ್ ಎರ್ಡೋಗನ್, ಇತ್ತೀಚಿಗೆ ಇಸ್ಲಾಮಿಕ್ ರಾಷ್ಟ್ರವೊಂದು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸದಸ್ಯರಾಗಿರಬೇಕು ಎಂದು ಹೇಳಿದ್ದರು. ಪ್ರಸ್ತುತ ಮಂಡಳಿಯಲ್ಲಿ ಚೀನಾ, ಅಮೆರಿಕಾ, ಬ್ರಿಟನ್, ಫ್ರಾನ್ಸ್ ಮತ್ತು ರಷ್ಯಾ ಕಾಯಂ ಸದಸ್ಯ ರಾಷ್ಟ್ರಗಳಾಗಿವೆ.

***************

ಆಹಾರ ಬೆಲೆಗಳಲ್ಲಿ ಗಣನೀಯ ಇಳಿಕೆಯಿಂದಾಗಿ ಕಳೆದ ತಿಂಗಳಲ್ಲಿ ಭಾರತದ ಚಿಲ್ಲರೆ ಹಣದುಬ್ಬರ ಶೇಕಡ 3.34 ಕ್ಕೆ ಇಳಿದಿದೆ. ಆಗಸ್ಟ್ 2019 ರ ನಂತರ ಸುಮಾರು ಆರು ವರ್ಷಗಳಲ್ಲಿ ಇದು ಅತ್ಯಂತ ಕಡಿಮೆ ವಾರ್ಷಿಕ ಹಣದುಬ್ಬರವಾಗಿದೆ ಎಂದು ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ತಿಳಿಸಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಹಣದುಬ್ಬರ ಶೇಕಡ 3.25 ರಷ್ಟಿದ್ದು, ನಗರ ಪ್ರದೇಶಗಳಲ್ಲಿ ಇದು ಶೇಕಡ 3.43 ರಷ್ಟಿದೆ ಎಂದು ಸಚಿವಾಲಯ ತಿಳಿಸಿದೆ.

ಅಖಿಲ ಭಾರತ ಗ್ರಾಹಕ ಆಹಾರ ಬೆಲೆ ಸೂಚ್ಯಂಕದ ಆಧಾರದ ಮೇಲೆ ಕಳೆದ ತಿಂಗಳ ಆಹಾರ ಹಣದುಬ್ಬರ ದರ ತಾತ್ಕಾಲಿಕವಾಗಿ ಶೇಕಡ 2.69 ರಷ್ಟಿದೆ ಎಂದು ವರದಿಯಾಗಿದೆ, ಫೆಬ್ರವರಿಯಲ್ಲಿ ದಾಖಲಾದ ಶೇಕಡ 3.75 ಕ್ಕೆ ಹೋಲಿಸಿದರೆ ಇದು ಕಡಿಮೆಯಾಗಿದೆ. ನವೆಂಬರ್ 2021 ರ ನಂತರದ ಕನಿಷ್ಠ ಮಟ್ಟವಾಗಿದೆ.

***************

ನವದೆಹಲಿಯ ಸಂಸತ್ ಭವನದಲ್ಲಿಂದು ನೂತನ ಆದಾಯ ತೆರಿಗೆ ಮಸೂದೆ-2025 ಕುರಿತಾದ ಲೋಕಸಭಾ ಆಯ್ಕೆ ಸಮಿತಿ ಸಭೆ ಪ್ರಗತಿಯಲ್ಲಿದೆ. 31 ಸದಸ್ಯರ ಸಮಿತಿಗೆ ಬಿಜೆಪಿ ಸಂಸದ ಬೈಜಯಂತ್ ಪಾಂಡಾ ನೇತೃತ್ವ ವಹಿಸಿದ್ದಾರೆ.

ಸಂಸತ್ತಿನ ಮಳೆಗಾಲದ ಅಧಿವೇಶನದ ಮೊದಲ ದಿನ ಸಮಿತಿ ತನ್ನ ವರದಿ ಸಲ್ಲಿಸಲಿದೆ.

ಆದಾಯ ತೆರಿಗೆಗೆ ಸಂಬಂಧಿಸಿದ ಕಾನೂನುಗಳನ್ನು ಕ್ರೋಡೀಕರಿಸಲು ಮತ್ತು ತಿದ್ದುಪಡಿ ಮಾಡುವ ಗುರಿಯನ್ನು ನೂತನ ಆದಾಯ ತೆರಿಗೆ ಮಸೂದೆ ಹೊಂದಿದೆ.

ಇತ್ತೀಚಿನ ಸಂಸತ್ತಿನ ಬಜೆಟ್ ಅಧಿವೇಶನದಲ್ಲಿ ಇದನ್ನು ಲೋಕಸಭೆಯಲ್ಲಿ ಮಂಡಿಸಲಾಯಿತು. ನಂತರ ಕರಡು ಕಾನೂನನ್ನು ಸದನದ ಆಯ್ಕೆ ಸಮಿತಿಗೆ ಉಲ್ಲೇಖಿಸಲಾಯಿತು.

***************

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ತನ್ನ ಹಿರಿಯ ನಾಯಕರಾದ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ವಿರುದ್ಧ ಆರೋಪ ಪಟ್ಟಿ ಸಲ್ಲಿಕೆಯಾದ ನಂತರ ಕಾಂಗ್ರೆಸ್ ಜಾರಿ ನಿರ್ದೇಶನಾಲಯವನ್ನು ಬೆದರಿಸಲು ಪ್ರಯತ್ನಿಸುತ್ತಿದೆ ಎಂದು ಬಿಜೆಪಿ ಆರೋಪಿಸಿದೆ.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ರವಿಶಂಕರ್ ಪ್ರಸಾದ್, ಈ ಪ್ರಕರಣದಲ್ಲಿ ಇಡಿ ಕೈಗೊಂಡಿರುವ ಕ್ರಮ ಕಾನೂನು ವಿಧಾನಕ್ಕೆ ಅನುಗುಣವಾಗಿದ್ದು, ಕಾಂಗ್ರೆಸ್ ಪ್ರತಿಭಟನೆಗಳ ಮೂಲಕ ಅಡೆತಡೆ ಸೃಷ್ಟಿಸಲು ಪ್ರಯತ್ನಿಸುತ್ತಿದೆ. ಯಂಗ್ ಇಂಡಿಯಾ ಸಂಘಟನೆಯ ಸೋಗಿನಲ್ಲಿ ಕಾಂಗ್ರೆಸ್ ಪಕ್ಷ ಅಕ್ರಮವಾಗಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆ ಎಂದು ಅವರು ಆರೋಪಿಸಿದರು.

***************

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ಉತ್ತರಾಖಂಡಕ್ಕೆ ಭೇಟಿ ನೀಡಲಿದ್ದಾರೆ. ಅವರು ಋಷಿಕೇಶ ರೈಲು ನಿಲ್ದಾಣದ ಪರಿಶೀಲನೆ ನಡೆಸಲಿದ್ದಾರೆ.

ನಂತರ ಸಚಿವರು, ಪೌರಿ ಗರ್ವಾಲ್ ಜಿಲ್ಲೆಯ ಜನಸು ಸುರಂಗ ಯೋಜನಾ ಸ್ಥಳಕ್ಕೆ ಭೇಟಿ ನೀಡಿ, ಋಷಿಕೇಶ–ಕರಣಪ್ರಯಾಗ ರೈಲು ಯೋಜನೆಯ ಪ್ರಮುಖ ಭಾಗವಾದ ಜನಸು ಸುರಂಗದ ನಿರ್ಮಾಣ ಕಾರ್ಯವನ್ನು ಪರಿಶೀಲಿಸಲಿದ್ದಾರೆ.

***************

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯವು 9ನೇ ಸುತ್ತಿನ ಮುಕ್ತ ಎಕರೆ ಪರವಾನಗಿ ನೀತಿ ಬಿಡ್ ಅಡಿಯಲ್ಲಿ 1.36 ಲಕ್ಷ ಚದರ ಕಿಲೋಮೀಟರ್ ವಿಸ್ತೀರ್ಣದಲ್ಲಿ 28 ಬ್ಲಾಕ್ ಗಳನ್ನು ನೀಡಿದೆ. ಇದು ಬಳಕೆಯಾಗದ ಇಂಧನ ಸಾಮರ್ಥ್ಯವನ್ನು ಉಪಯೋಗಿಸಿಕೊಳ್ಳುವಲ್ಲಿ ಸಹಕಾರಿಯಾಗಿದ್ದು, ಆಮದು ಅವಲಂಬನೆಯನ್ನು ಕಡಿಮೆ ಮಾಡುತ್ತದೆ ಎಂದು ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ.

***************

ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ ಭದ್ರತಾಪಡೆಗಳು ಮತ್ತು ಮಾವೋವಾದಿಗಳ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಇಬ್ಬರು ಮಾವೋವಾದಿಗಳು ಹತರಾಗಿದ್ದಾರೆ.

ಕೊಂಡಗಾಂವ್ ಮತ್ತು ನಾರಾಯಣಪುರ ಜಿಲ್ಲೆಗಳ ಗಡಿಯಲ್ಲಿರುವ ಕಿಲಾಮ್ ಬರ್ಗಮ್ ಗ್ರಾಮಗಳ ಅರಣ್ಯ ಪ್ರದೇಶದಲ್ಲಿ ನಿನ್ನೆ ಸಂಜೆ ಜಿಲ್ಲಾ ಮೀಸಲು ಪಡೆಯ, ನಕ್ಸಲ್ ವಿರೋಧಿ ಕಾರ್ಯಾಚರಣೆಯ ವೇಳೆ ಈ ಗುಂಡಿನ ಚಕಮಕಿ ನಡೆಸಿದೆ ಎಂದು ಬಸ್ತಾರ್ ಶ್ರೇಣಿಯ ಪೊಲೀಸ್ ಮಹಾನಿರ್ದೇಶಕ ಸುಂದರ್ ರಾಜ್. ಪಿ ತಿಳಿಸಿದ್ದಾರೆ.

***************

ಬೋಯಿಂಗ್ ಸಂಸ್ಥೆ ಜೊತೆಗಿನ ಪ್ರಮುಖ ವಿಮಾನ ಒಪ್ಪಂದವನ್ನು ಚೀನಾ ರದ್ದುಗೊಳಿಸಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆರೋಪಿಸಿದ್ದಾರೆ.

ಹೊಸ ಬೋಯಿಂಗ್ ವಿಮಾನಗಳು ಮತ್ತು ಬಿಡಿಭಾಗಗಳನ್ನು ಸ್ವೀಕರಿಸುವುದನ್ನು ನಿಲ್ಲಿಸುವಂತೆ ಚೀನಾ ತನ್ನ ವಿಮಾನಯಾನ ಸಂಸ್ಥೆಗಳಿಗೆ ಸೂಚಿಸಿದೆ ಎಂದು ವರದಿಯಾಗಿದೆ.

ಅಮೆರಿಕದ ಕಂಪನಿಗಳಿಂದ ಜೆಟ್ ಸಂಬಂಧಿತ ಭಾಗಗಳು ಹಾಗೂ ಉಪಕರಣಗಳ ಖರೀದಿಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಬೀಜಿಂಗ್ ವರದಿಯೊಂದು ತಿಳಿಸಿದೆ.

ಚೀನಾ ಸರಕುಗಳ ಮೇಲೆ ನೂತನ ಅಮೆರಿಕ ಸುಂಕಗಳಿಗೆ ಪ್ರತಿಯಾಗಿ ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ವಿಶ್ಲೇಷಿಸಲಾಗಿದೆ.

***************

ಪೆರುವಿನ ಲಿಮಾದಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ಶೂಟಿಂಗ್ ವಿಶ್ವಕಪ್ ನ ಮೊದಲನೇ ದಿನವಾದ ನಿನ್ನೆ ಭಾರತ ತಲಾ ಒಂದು ಚಿನ್ನ, ಬೆಳ್ಳಿ ಮತ್ತು ಕಂಚಿನ ಪದಕ ಗೆಲ್ಲುವ ಮೂಲಕ ಉತ್ತಮ ಪ್ರದರ್ಶನ ತೋರಿದೆ.

ಮಹಿಳಾ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಭಾರತದ ಸುರುಚಿ ಸಿಂಗ್ ಸ್ವರ್ಣ ಪದಕ ಗೆದ್ದರೆ, ಮನು ಭಾಕರ್ ರಜತ ಪದಕಕ್ಕೆ ಕೊರಳೊಡ್ಡಿದ್ದಾರೆ.

ಇನ್ನು ಪುರುಷರ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಭಾರತದ ಸೌರಭ್ ಚೌಧರಿ, ಕಂಚಿನ ಪದಕ ತಮ್ಮದಾಗಿಸಿಕೊಂಡಿದ್ದಾರೆ.

***************

ದೆಹಲಿಯ ಅರುಣ್ ಜೆಟ್ಲಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್ –ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ ರಾಯಲ್ಸ್ ತಂಡಗಳು ಸೆಣಸಲಿವೆ. ಪಂದ್ಯ ರಾತ್ರಿ 7.30 ಕ್ಕೆ ಪ್ರಾರಂಭವಾಗಲಿದೆ.

ಚಂಡೀಗಢದ ಮಹಾರಾಜ ಯಾದವೀಂದ್ರ ಸಿಂಗ್ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ ತಂಡ 16 ರನ್‌ಗಳ ಗೆಲುವು ಸಾಧಿಸಿದೆ.

***************

ಮುಂದಿನ ಎರಡು ದಿನಗಳಲ್ಲಿ ರಾಜಸ್ಥಾನ ಮತ್ತು ಗುಜರಾತ್‌ನಲ್ಲಿ ಬಿಸಿಗಾಳಿ ಇರಲಿದೆ ಎಂದು ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದೆ.

ಕರಾವಳಿ ಕರ್ನಾಟಕ, ತಮಿಳುನಾಡು, ಪುದುಚೇರಿ, ಕಾರೈಕಲ್, ಕೇರಳ ಮತ್ತು ಮಾಹೆಯಲ್ಲಿ ಇಂದು ಬಿಸಿ ಮತ್ತು ಆರ್ದ್ರ ವಾತಾವರಣ ಇರುವ ಸಾಧ್ಯತೆಯಿದೆ.

ಅಸ್ಸಾಂ ಮತ್ತು ಮೇಘಾಲಯದಲ್ಲಿ ನಾಳೆಯವರೆಗೆ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ಮುಂದಿನ 3 ರಿಂದ 4 ದಿನಗಳಲ್ಲಿ ಉತ್ತರ, ಈಶಾನ್ಯ ಮತ್ತು ಪೂರ್ವ ಭಾರತದಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿಯೊಂದಿಗೆ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆ ಇದೆ.

ಕರ್ನಾಟಕದ ಉತ್ತರ ಮತ್ತು ದಕ್ಷಿಣ ಒಳನಾಡು, ಆಂಧ್ರಪ್ರದೇಶದ ಕರಾವಳಿ, ಯಾನಂ, ಕೇರಳ ಮತ್ತು ಮಾಹೆಯಲ್ಲೂ ಇದೇ ರೀತಿಯ ಪರಿಸ್ಥಿತಿ ಇರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

***************

2028 ರಲ್ಲಿ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ, ಪೊಮೊನಾದ ಫೇರ್‌ಗ್ರೌಂಡ್ಸ್‌ನಲ್ಲಿ ತಾತ್ಕಾಲಿಕವಾಗಿ ನಿರ್ಮಿಸಲಾದ ಮೈದಾನದಲ್ಲಿ ಕ್ರಿಕೆಟ್ ಪಂದ್ಯಗಳು ನಡೆಯಲಿವೆ ಎಂದು ಒಲಿಂಪಿಕ್ಸ್ ಸಂಘಟನಾ ಸಮಿತಿಯು ನಿನ್ನೆ ಘೋಷಣೆ ಮಾಡಿದೆ.

*******ಮುಕ್ತಾಯ*******